ಕರ್ನಾಟಕ ವಿಧಾನಸಭೆ

ಮಂಗಳವಾರ 9ನೇ ಜುಲೈ 2002

ಸದನವು ವಿಧಾನ ಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ : 11.00 ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು ಶ್ರೀ ಎಂ.ವಿ. ವೆಂಕಟಪ್ಪ ಅವರು ಪೀಠವನ್ನು ಅಲಂಕರಿಸಿದರು.

1. ನಿಲುವಳಿ ಸೂಚನೆ ಮಂಡನೆಗೆ ಅನುಮತಿ ಕೋರಿಕೆ

(ಅ) ವಿಷಯ: ಮುಂಗಾರು ಮಳೆ ವಿಫಲದಿಂದಾಗಿ ರಾಜ್ಯದಲ್ಲಿ ಬರಗಾಲ ಪರಿಸ್ಥಿತಿ ಉಂಟಾಗಿರುವ ಬಗ್ಗೆ

ಶ್ರೀ ಜಗದೀಶ್ ಶೆಟ್ಟರ್ (ವಿರೋಧ ಪಕ್ಷದ ನಾಯಕರು) : ಸನ್ಮಾನ್ಯ ಅಧ್ಯಕ್ಷರೆ, ಪ್ರಸಕ್ತ ವರ್ಷ ರಾಜ್ಯದಲ್ಲಿ ಬರದ ಪರಿಸ್ಥಿತಿ ನಿರ್ಮಾಣವಾಗಿದ್ದು, ಮುಂಗಾರು ಮಳೆ ವಿಫಲವಾಗುತ್ತಿದೆ. ಕಳೆದ ವಾರ ರಾಜ್ಯದ ಕೆಲವೊಂದು ಜಿಲ್ಲೆಗಳಲ್ಲಿ ಸಾಕಷ್ಟು ಮಳೆಯಾಗಿರುವುದರಿಂದ ರೈತರಿಗೆ ಅನುಕೂಲವಾಗುತ್ತದೆಂದು ತಿಳಿದುಕೊಂಡಿದ್ದೆವು. ಕಳೆದ ವರ್ಷವಂತೂ ರೈತರು ಬರಗಾಲದಿಂದ ತತ್ತರಿಸಿ ಹೋಗಿದ್ದರು. ಈ ವರ್ಷವಾದರೂ ರೈತರು ಬದುಕುತ್ತಾರೆಂದು ತಿಳಿದಿದ್ದೆವು. ಆದರೆ, ಪುನಃ ಬರಗಾಲದ ಛಾಯೆ ಮೂಡುತ್ತಿದ್ದು, ಮುಂಗಾರು ಮಳೆ ಕೈಕೊಡುತ್ತಿದೆ. ವಿಶೇಷವಾಗಿ ಸರ್ಕಾರದಿಂದ ರೈತರಿಗೆ ಬರಬೇಕಾದ ಬೆಳೆ ವಿಮೆ ಹಣ ಇವೊತ್ತಿಗೂ ಸಹ ಪಾವತಿಯಾಗಿಲ್ಲ. ಹೀಗಾಗಿ ರೈತರು ಒಂದರ ಮೇಲೊಂದು ಸಮಸ್ಯೆಗಳ ಸುಳಿಗೆ ಸಿಕ್ಕಿ ಸಂಕಷ್ಟದಲ್ಲಿದ್ದಾರೆ. ಆದಕಾರಣ, ಬರದ ಪರಿಸ್ಥಿತಿ, ಬೆಳೆ ವಿಮೆ ಹಣ ಸಂದಾಯ ಹಾಗೂ ರೈತರು ಎದುರಿಸುತ್ತಿರುವ ಇನ್ನಿತರ ಸಂಕಷ್ಟಗಳ ಬಗ್ಗೆ ಇವೊತ್ತು ಪ್ರಥಮ ಪ್ರಾಶಸ್ತ್ಯ ನೀಡಿ ಚರ್ಚೆಗೆ ತೆಗೆದುಕೊಳ್ಳಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ನಾವು ನಿಲುವಳಿ ಸೂಚನೆಯನ್ನು ಮಂಡಿಸಿದ್ದು, ಮಾನ್ಯ ಅಧ್ಯಕ್ಷರು ಈ ವಿಷಯ ಕುರಿತಂತೆ ;ಚರ್ಚೆಗೆ ಹೆಚ್ಚು ಕಾಲಾವಕಾಶ ನೀಡುವ ಮೂಲಕ ಅವಕಾಶ ಕಲ್ಪಿಸಿಕೊಡಬೇಕು. ರೈತರು ಬಹಳಷ್ಟು ತೊಂದರೆಯಲ್ಲಿರುವುದರಿಂದ ಇಂದು ಕೈಗೆತ್ತಿಕೊಳ್ಳಬೇಕೆಂದಿರುವ ಇತರ ಎಲ್ಲಾ ಕಲಾಪಗಳನ್ನು ಬದಿಗೊತ್ತಿ ನಿಲುವಳಿ ಸೂಚನೆಯನ್ನು ಮಂಡಿಸುವುದಕ್ಕೆ ಹಾಗೂ ಆ ಕುರಿತು ಪ್ರಸ್ತಾಪಿಸುವುದಕ್ಕೆ ತಾವು ದಯವಿಟ್ಟು ಅನುಮತಿ ಕೊಡಬೇಕೆಂದು ತಮ್ಮಲ್ಲಿ ವಿನಂತಿಸಿಕೊಳ್ಳುತ್ತಿದ್ದೇನೆ.

(ಅ) ವಿಷಯ: ಬೆಳೆ ವಿಮೆ ವಿಚಾರದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಬರುವ ಹಣ ಸರಿಯಾಗಿ ವಿತರಣೆಯಾಗದಿರುವುದು.

ಶ್ರೀ ಪಿ.ಜಿ. ಆರ್. ಸಿಂಧ್ಯ (ಕನಕಪುರ) : ಮಾನ್ಯ ಅಧ್ಯಕ್ಷರೆ, ಮಾನ್ಯ ವಿರೋಧ ಪಕ್ಷದ ನಾಯಕರು ಕಳುಹಿಸಿರುವ ನಿಲುವಳಿ ಸೂಚನೆಯಂತೆಯೇ ನಮ್ಮ ಪಕ್ಷದ ವತಿಯಿಂದ ಮತ್ತೊಂದು ನಿಲುವಳಿ ಸೂಚನೆಯನ್ನು ಕಳುಹಿಸಿಕೊಟ್ಟಿದ್ದೇವೆ. ಮುಖ್ಯವಾಗಿ ಬೆಳೆ ವಿಮೆ ವಿಚಾರದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಬರುವ ಹಣವೇನಿದೆ, ಇದರ ವಿತರಣೆ ಸರಿಯಾಗಿ